# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.**

ಸಂಖ್ಯೆ: ಎ8/ಎಸ್‌ಎಸ್‌ಎಲ್‌ಸಿ/ಪೂಸಿಪ/30/2019-20 ದಿನಾಂಕ: 18-02-2020

**ಸು ತ್ತೋ ಲೆ**

ವಿಷಯ: ರಾಜ್ಯ ಮಟ್ಟದಲ್ಲಿ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯನ್ನು ಕಟ್ಟುನಿಟ್ಟಾಗಿ ನಡೆಸುವ ಬಗ್ಗೆ

ಉಲ್ಲೇಖ:1) ಈ ಕಚೇರಿ ಸುತ್ತೋಲೆ ಸಮ ಸಂಖ್ಯೆ, ದಿನಾಂಕ: 30-11-2019

2)ಈ ಕಚೇರಿ ಜ್ಞಾಪನ ಸಂಖ್ಯೆ: ಎ8/ಎಸ್‌ಎಸ್‌ಎಲ್‌ಸಿ/ಪೂಸಿಪ/30/2019-20 ದಿನಾಂಕ: 05-02-2020

- - - - - - -

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ ಪತ್ರ-2 ರಲ್ಲಿ ಎಸ್.ಎಸ್.ಎಲ್.ಸಿ. ಪೂರ್ವ ಸಿದ್ಧತಾ ಪರೀಕ್ಷೆಯನ್ನು ವ್ಯವಸ್ಥಿತವಾಗಿ ಯಾವುದೇ ಅಡಚಣೆ ಮತ್ತು ತೊಂದರೆಯಾಗದಂತೆ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯನ್ನು ಯಾವರೀತಿ ನಡೆಸಲಾಗುತ್ತದೆಯೋ ಅದೇ ರೀತಿ ಕಟ್ಟುನಿಟ್ಟಾಗಿ ನಡೆಸಲು ತಿಳಿಸಲಾಗಿತ್ತು. ಆದರೆ ದಿನಾಂಕ: 18-02-2020 ರಂದು ನಡೆದ ಗಣಿತ ವಿಷಯದ ಪರೀಕ್ಷೆಯಲ್ಲಿ, ಪರೀಕ್ಷೆಯ ಪ್ರಾರಂಭವಾದ ನಂತರ ಗಣಿತ ಪ್ರಶ್ನೆಪತ್ರಿಕೆಯು ವಾಟ್ಸ್‌ಅಪ್ ನಲ್ಲಿ ಹರಿದಾಡಿರುವುದು ತಿಳಿದು ಬಂದಿದೆ. ಇದು ಯಾವರೀತಿ ಹೊರಗೆ ಬಂದಿದೆ ಯಾರು ಇದನ್ನು ವಾಟ್ಸ್‌ಅಪ್ ನಲ್ಲಿ ಹರಿಬಿಟ್ಟಿದ್ದಾರೆ ಎಂಬುದರ ಜಾಡು ಹಿಡಿದು, ಅಂತಹವರ ಮೇಲೆ ಹಾಗೂ ಇಂತಹ ಕೃತ್ಯ ನಡೆಸಲು ಸಹಕರಿಸಿದವರ ಮೇಲೆ ಕಾನೂನಿನ ಪ್ರಕಾರ ಶಿಸ್ತು ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಯಲ್ಲಿ ದೂರು ದಾಖಲಿಸಲಾಗಿದೆ ಮತ್ತು ಮಂಡಳಿಯ ಆಕ್ಟ್ ಪ್ರಕಾರ ಕೂಡ ಶಿಸ್ತು ಕ್ರಮ ಜರುಗಿಸಲಾಗುತ್ತದೆ.

ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಮರುಕಳಿಸದಂತೆ, ಎಲ್ಲಾ ಮುಖ್ಯ ಶಿಕ್ಷಕರು ಎಚ್ಚರಿಕೆ ವಹಿಸಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದು ಮತ್ತು ಕಟ್ಟುನಿಟ್ಟಾಗಿ ಮೊಬೈಲ್ ಫೋನ್‌ಗಳನ್ನು ಪರೀಕ್ಷಾ ಕೇಂದ್ರಕ್ಕೆ ತರದಂತೆ ಸೂಚನೆಗಳನ್ನು ನೀಡುವುದು. ಮುಂದಿನ ಪರೀಕ್ಷಾ ದಿನಗಳಲ್ಲಿ ಇಂತಹ ಪ್ರಕರಣಗಳು ನಡೆದರೆ ಶಾಲಾ ಮುಖ್ಯ ಶಿಕ್ಷಕರೇ ಕಾರಣಕರ್ತರಾಗುವುದಲ್ಲದೆ, ಮುಂದಿನ ಆಗುಹೋಗುಗಳಿಗೆ ಅವರೇ ಜವಾಬ್ದಾರರಾಗುತ್ತಾರೆ. ಈ ವಿಷಯವನ್ನು ತೀವ್ರವಾಗಿ ಪರಿಗಣಿಸಿ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯನ್ನು ನಡೆಸಲು ಯಾವ ರೀತಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತದೆಯೋ ಅದೇರೀತಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸಲು ಎಚ್ಚರಿಕೆಯ ಕ್ರಮಗಳನ್ನು ಕೈಗೊಂಡು ಪೂರ್ವಸಿದ್ಧತಾ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಸೂಚಿಸಿದೆ.

ಈ ರೀತಿ ಯಾರು ನಿಯಮಬಾಹಿರವಾಗಿ ಇಂತಹ ಕೃತ್ಯಗಳಲ್ಲಿ ತೊಡಗುತ್ತಾರೋ ಅಂತಹವರನ್ನು ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆ ನಡೆಯುವ ಒಂದು ವಾರದ ಮುಂಚೆ ಪೊಲೀಸ್ ಕಸ್ಟಡಿಗೆ ತೆಗೆದುಕೊಳ್ಳಲು ಸೂಚನೆ ನೀಡಲಾಗುತ್ತದೆ. ಆದುದರಿಂದ, ಇಂತಹ ಯಾವುದೇ ಪ್ರಕರಣಗಳಿಗೆ ಆಸ್ಪದ ಕೊಡದಂತೆ, ಶಾಲಾ ಮುಖ್ಯ ಶಿಕ್ಷಕರು ಹಾಗೂ ಸಂಬಂಧಿಸಿದ ಅಧಿಕಾರಿಗಳು ಕ್ರಮವಹಿಸಲು ತಿಳಿಸಿದೆ.

(ವಿ. ಸುಮಂಗಲ) 18/2/2020

ನಿರ್ದೇಶಕರು, ಪರೀಕ್ಷೆಗಳು.

ಗೆ,

1) ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಮುಂದಿನ ಕ್ರಮಕ್ಕಾಗಿ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ರವರಿಗೆ ಮಂದಿನ ಕ್ರಮಕ್ಕಾಗಿ
3) ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನರಹಿತ ಪ್ರೌಢಶಾಲೆ/ ಸಂಯುಕ್ತ ಪದವಿ ಪೂರ್ವ ಕಾಲೇಜು ಮುಖ್ಯಸ್ಥರುಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ
4) ಕಚೇರಿ ಪ್ರತಿ